*O.S./154/2023*
*A.W-1*

(ಸಾಕ್ಷಿಗೆ ದಿನಾಂಕ: 15.01.2025 ರಂದು ಪ್ರಮಾಣ ವಚನ ಬೋಧಿಸಲಾಯಿತು)

**ಸಿ.ಪಿ.ಸಿ ಕ್ರಮಾದೇಶ 7 ನಿಯಮ 10ರ ಅಡಿಯಲ್ಲಿ ಸಲ್ಲಿಸಿದ ಮಧ್ಯಂತರ ಅರ್ಜಿ-3ರ ಮೇಲೆ ವಿಚಾರಣೆಃ ಶ್ರೀ ಎಂ.ಎ.ಸಿ., 2ನೇ ಪ್ರತಿವಾದಿ ಪರ ವಕೀಲರಿಂದಃ**

ಈ ದಿನ ನಾನು ಮಧ್ಯಂತರ ಅರ್ಜಿ-3ರ ಮೇಲೆ ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ನಮೂದಿಸಿರುವ ಎಲ್ಲಾ ಅಂಶಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ನನ್ನ ಮಧ್ಯಂತರ ಅರ್ಜಿ-3ರ ಮೇಲಿನ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಲು ವಕೀಲರಿಗೆ ನಾನೇ ಮಾಹಿತಿ ನೀಡಿರುತ್ತೇನೆ. ಇದನ್ನು ನಾನೇ ಹೇಳಿ ಬರೆಯಿಸಿ ನನ್ನ ಸಹಿಯನ್ನು ಮಾಡಿರುತ್ತೇನೆ.

ನನ್ನ ಅರ್ಜಿಗೆ ಪೂರಕವಾಗಿ ತುಮಕೂರು ಜಿಲ್ಲಾ ನೋಂದಣಾಧಿಕಾರಿಗಳ ಕಾರ್ಯಾಲಯದಿಂದ ದಾವಾ ಸ್ವತ್ತಿನ ಮಾರುಕಟ್ಟೆಗೆ ಸಂಬಂಧಿಸಿ ಹೊರಡಿಸಲಾದ ಅಧಿಸೂಚನೆಯನ್ನು ಹಾಜರುಪಡಿಸುತ್ತಿದ್ದೇನೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ದಾಖಲೆಯನ್ನು ನಿ.ಎ.1 ಎಂದು ಗುರುತಿಸಲಾಯಿತು. ದಾವಾ ಸ್ವತ್ತಿನ ಮಾರುಕಟ್ಟೆ ಮೌಲ್ಯವನ್ನು ಬಿಂಬಿಸುವ ನಿರ್ಧಿಷ್ಟ ನಮೂದನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ನಮೂದನ್ನು ನಿ.ಎ.1(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಎಸ್.ಯು.ಎಸ್., ವಾದಿಗಳ ಪರ ವಕೀಲರಿಂದಃ**

ವಾದಿಗಳು ಮತ್ತು ವಾದಿಗಳ ಪರ ವಕೀಲರು ಗೈರು ಹಾಜರಾದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಇದೆ
ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ,
ಕುಣಿಗಲ್.